01	ಬೆಂಗಳೂರು ನಗರ ಜಿಲ್ಲೆ (ಸಹಕಾರ ಸಂಘಗಳ ನಿಬಂಧಕರ ಕಛೇರಿಯನ್ನು ಒಳಗೊಂಡಂತೆ)	02
02	ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು	01
03	ಚಿತ್ರದುರ್ಗ, ಶಿವಮೊಗ್ಗ, ದಾವಣಗೆರೆ	01
04	ಮೈಸೂರು, ಮಂಡ್ಯ ಹಾಗೂ ಚಾಮರಾಜನಗರ	01
05	ಹಾಸನ, ಚಿಕ್ಕಮಗಳೂರು ಹಾಗೂ ಕೊಡಗು ಹಾಗು ಉತ್ತರಕನ್ನಡ	01
06	ದಕ್ಷಿಣ ಕನ್ನಡ, ಕಾರವಾರ, ಉಡುಪಿ ಹಾಗೂ ಉತ್ತರ ಕನ್ನಡ	01
07	ಬೆಳಗಾವಿ	01
08	ಬಿಜಾಪುರ ಹಾಗೂ ಬಾಗಲಕೋಟೆ	01
09	ಧಾರವಾಡ, ಗದಗ ಹಾಗೂ ಹಾವೇರಿ	01
10	ಗುಲಬರ್ಗಾ, ಹಾವೇರಿ, ಬಳ್ಳಾರಿ, ರಾಯಚೂರು ಹಾಗೂ ಕೊಪ್ಪಳ	01
ಒಟ್ಟು	11 ನ್ಯಾಯಾಲಯಗಳು	

ಇ) ಹೌದು.

ಆರ್ಥಿಕ ಇಲಾಖೆಗೆ ಅನುಮೋದನೆ ಕೋರಿ ದಿನಾಂಕ11.06.2010ರಂದು ಕಡತವನ್ನು ಕಳುಹಿಸಲಾಗಿದೆ.

ತೋಟಗಾರಿಕಾ ವಿಶ್ವವಿದ್ಯಾನಿಲಯ ಮಂಜೂರಾತಿ

190(407) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳದಲ್ಲಿ ತೋಟಗಾರಿಕಾ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸುವುದಾಗಿ ಅಯವ್ಯಯದ ಅಧಿವೇಶನದ ಸಮಯದಲ್ಲಿ ಘೋಷಣೆ ಮಾಡಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಈ ವಿಶ್ವವಿದ್ಯಾನಿಲಯವನ್ನು ಪ್ರಸಕ್ತ ಸಾಲಿನಲ್ಲಿಯೇ ಪ್ರಾರಂಭಿಸಲಾಗುವುದೇ;

ಇ) ಈ ತೋಟಗಾರಿಕಾ ವಿಶ್ವ ವಿದ್ಯಾನಿಲಯಕ್ಕೆ ನಿಗದಿಪಡಿಸಿರುವ ಮೊತ್ತವೆಷ್ಟು?

ಶ್ರೀ ಉಮೇಶ್ ವಿ ಕತ್ತಿ(ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು):

ಅ) ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕೆ ಕಾಲೇಜನ್ನು ಮಾತ್ರ ಪ್ರಾರಂಭಿಸುವುದಾಗಿ ಆಯವ್ಯಯದ ಅಧಿವೇಶನದ ಸಮಯದಲ್ಲಿ ಘೋಷಣೆ ಮಾಡಿ 2010–11ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಕೊಪ್ಪಳದಲ್ಲಿ ತೋಟಗಾರಿಕೆ ಕಾಲೇಜನ್ನು ಹೊಸದಾಗಿ ಆರಂಭಿಸಲು ಸರ್ಕಾರ ನಿರ್ಧರಿಸಿದೆ.

ಆ) ಸರ್ಕಾರದ ಆದೇಶ ಸಂಖ್ಯೆ: ತೋಇ 155 ತೋಇವಿ 2010, ದಿನಾಂಕ:02.05.2010ರನ್ವಯ, ಪ್ರಸಕ್ತ 2010–11ನೇ ಸಾಲಿನಲ್ಲಿಯೇ ಕೊಪ್ಪಳ ಜಿಲ್ಲೆಯ ಮುನಿರಾಬಾದಿನಲ್ಲಿ ತೋಟಗಾರಿಕೆ ಕಾಲೇಜನ್ನು ಪ್ರಾರಂಭಿಸಲಾಗುವುದು.

ಇ) ಈ ತೋಟಗಾರಿಕೆ ಕಾಲೇಜನ್ನು ಸ್ಥಾಪಿಸಲು 2010–11ನೇ ವರ್ಷಕ್ಕೆ 5 ಕೋಟಿ ರೂಪಾಯಿ ನಿಗದಿಪಡಿಸಲಾಗಿದೆ.

ಕೊಪ್ಪಳ ನಗರಕ್ಕೆ ಬೈಪಾಸ್ ರಸ್ತೆ

191(540) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರಕ್ಕೆ ಬೈಪಾಸ್ ರಸ್ತೆ ನಿರ್ಮಾಣ ಹಾಗೂ ರಸ್ತೆ ಅಗಲೀಕರಣ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಈ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿಯೇ ಕೈಗೆತ್ತಿಕೊಳ್ಳಲಾಗುವುದೇ;

ಇ) ಹಾಗಿದ್ದಲ್ಲಿ, ಈ ಕಾಮಗಾರಿಗಳಿಗೆ ನಿಗದಿಪಡಿಸಿರುವ ಅನುದಾನವೆಷ್ಟು (ವಿವರ ನೀಡುವುದು);

ಈ) ಕೊಪ್ಪಳ ತಾಲ್ಲೂಕಿನಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಹೆಚ್ಚಾಗಿದ್ದು, ಅತೀ ಹೆಚ್ಚು ಸರಕು ಸಾಗಾಣಿಕೆ ವಾಹನಗಳಿಂದ ರಸ್ತೆಗಳು ಸಂಪೂರ್ಣ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಲ-೨೪೨-೫೯